ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2015-16 ದಿನಾಂಕ: 4-3-2016

# ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ / ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1 | ಎನ್.ಎಸ್.ಎಸ್. ರಾಜ್ಯ ಪ್ರಶಸ್ತಿ ಪ್ರದಾನ:<br>ಶ್ರೀ ವಜುಭಾಯಿ ವಾಲಾ,<br>ಮಾನ್ಯ ರಾಜ್ಯಪಾಲರು, ಕರ್ನಾಟಕ<br>ರಾಜ್ಯ ಪ್ರಶಸ್ತಿ ವಿಜೇತರ ಕೈಪಿಡಿ ಬಿಡುಗಡೆ:<br>ಶ್ರೀ ಅಭಯಚಂದ್ರ ಜೈನ್,<br>ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು<br>ಮುಖ್ಯ ಅತಿಥಿಗಳು:<br>ಶ್ರೀ ಕಪಿಲ್ ಮೋಹನ್,<br>ಪ್ರಧಾನ ಕಾರ್ಯದರ್ಶಿಗಳು,<br>ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ | 5-3-2016<br>ಶನಿವಾರ<br>ಬೆಳಿಗ್ಗೆ<br>11-00 ಗಂಟೆಗೆ | ಬ್ಯಾಂಕ್ವೆಟ್ ಸಭಾಂಗಣ,<br>ರಾಜಭವನ,<br>ಬೆಂಗಳೂರು |
| 2 | ಪತ್ರಿಕಾಗೋಷ್ಠಿ:<br>ಶ್ರೀ ಯು.ಟಿ. ಖಾದರ್,<br>ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು | 5-3-2016<br>ಶನಿವಾರ<br>ಅಪರಾಹ್ನ<br>12-00 ಗಂಟೆಗೆ | ಕೊಠಡಿ ಸಂಖ್ಯೆ 318<br>ಮೂರನೇ ಮಹಡಿ,<br>ವಿಕಾಸ ಸೌಧ,<br>ಬೆಂಗಳೂರು |
| 3 | ಬೆಳ್ಳಿ ಸಿನಿಮಾ-ಬೆಳ್ಳಿ ಮಾತು:<br>ಬೆಳ್ಳಿ ಸಿನಿಮಾ: ಹಗ್ಗದ ಕೊನೆ<br>ಬೆಳ್ಳಿ ಮಾತು:<br>ಶ್ರೀ ದಯಾಳ್ ಪದ್ಮನಾಭನ್,<br>ಹಗ್ಗದ ಕೊನೆ ಚಿತ್ರದ ನಿರ್ದೇಶಕರು ಹಾಗೂ ನಿರ್ಮಾಪಕರು | 5-3-2016<br>ಶನಿವಾರ<br>ಸಂಜೆ 4-00<br>ಗಂಟೆಗೆ | ಶ್ರೀ ಚಾಮುಂಡೇಶ್ವರಿ ಸ್ಟುಡಿಯೋ<br>ಮಿಲ್ಲರ್ಸ್ ರಸ್ತೆ,<br>ಬೆಂಗಳೂರು |

| | | | |
|---|---|---|---|
| | ಮುಖ್ಯ ಅತಿಥಿಗಳು:<br><br>ಶ್ರೀ ನವೀನ್ ಕೃಷ್ಣ,<br>ಚಲನಚಿತ್ರ ನಟರು,<br>ಶ್ರೀ ಉಮೇಶ್ ಬಣಕಾರ್,<br>ಹಗ್ಗದ ಕೊನೆ ಚಿತ್ರದ ನಿರ್ಮಾಣಪಕರು<br><br>ಅಧ್ಯಕ್ಷತೆ:<br>ಶ್ರೀ ಎಸ್.ವಿ. ರಾಜೇಂದ್ರಸಿಂಗ್ ಬಾಬು,<br>ಅಧ್ಯಕ್ಷರು, ಕರ್ನಾಟಕ ಚಲನಚಿತ್ರ ಅಕಾಡೆಮಿ | | |
| 4 | ನೂತನ ರಾಜ್ಯ ಮಾಹಿತಿ ಆಯುಕ್ತರಿಗೆ ಪ್ರಮಾಣ ವಚನ:<br><br>ಪ್ರಮಾಣ ವಚನ ಬೋದನೆ:<br><br>ಶ್ರೀ ವಜುಭಾಯಿ ವಾಲ,<br>ಮಾನ್ಯ ರಾಜ್ಯಪಾಲರು, ಕರ್ನಾಟಕ<br><br>ಪ್ರಮಾಣ ವಚನ ಸ್ವೀಕಾರ:<br>1. ಶ್ರೀ ಎನ್. ಪಿ. ರಮೇಶ್<br>2. ಶ್ರೀ ಕೆ.ಎಂ. ಚಂದ್ರೇಗೌಡ<br>3. ಶ್ರೀ ಪಿ.ಜಿ. ವಿಜಯಕುಮಾರ್<br>4. ಡಾ: ಸುಚೇತನಾ ಸ್ವರೂಪ್ | 5–3–2016<br>ಶನಿವಾರ<br>ಸಂಜೆ 5–00<br>ಗಂಟೆಗೆ | ಬ್ಯಾಂಕ್ವೆಟ್ ಸಭಾಂಗಣ,<br>ರಾಜಭವನ,<br>ಬೆಂಗಳೂರು |

ನಿರ್ದೇಶಕರ ಪರವಾಗಿ

# ಪತ್ರಿಕಾ ಪ್ರಕಟಣೆ

## ಕಬ್ಬನ್ ಉದ್ಯಾನವನದಲ್ಲಿ ಈ ಭಾನುವಾರ

**ಬೆಂಗಳೂರು, ಮಾರ್ಚ್ 4 (ಕರ್ನಾಟಕ ವಾರ್ತೆ)**

ಶ್ರೀ ಚಾಮರಾಜೇಂದ್ರ ಉದ್ಯಾನವನ (ಕಬ್ಬನ್ ಪಾರ್ಕ್) ಒಳರಸ್ತೆಗಳಲ್ಲಿ ಭಾನುವಾರದ ದಿನಗಳಂದು ಸಾರ್ವಜನಿಕ ವಾಹನ ಸಂಚಾರವನ್ನು ನಿಷೇಧಿಸಲಾಗಿದ್ದು, ಉದ್ಯಾನವನದ ಆವರಣದಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರ ಅನುಕೂಲಕ್ಕಾಗಿ ಪ್ರತಿ ಭಾನುವಾರದ ದಿನಗಳಂದು ವಿವಿಧ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುತ್ತಿರುತ್ತದೆ. ದಿನಾಂಕ: 06–03–2016ರ ಭಾನುವಾರದಂದು ಶ್ರೀ ಚಾಮರಾಜೇಂದ್ರ ಉದ್ಯಾನವನದ (ಕಬ್ಬನ್ ಉದ್ಯಾನವನ) ಬ್ಯಾಂಡ್ ಸ್ಟ್ಯಾಂಡ್ ಆವರಣ ಹಾಗೂ ಮುಂಭಾಗದ ರಸ್ತೆಯಲ್ಲಿ ಮತ್ತು ಶ್ರೀ ಚಾಮರಾಜೇಂದ್ರ

ಒಡೆಯರ್ ಪ್ರತಿಮೆಯ ಸುತ್ತಮುತ್ತಲಿನ ಪ್ರದೇಶದಲ್ಲಿ ಈ ಕೆಳಕಂಡ ಕಾರ್ಯಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿರುತ್ತದೆ. ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಸದರಿ ಕಾರ್ಯಚಟುವಟಿಕೆಗಳ ಸದುಪಯೋಗವನ್ನು ಪಡೆದುಕೊಳ್ಳುವಂತೆ ಈ ಮೂಲಕ ಕೋರಲಾಗಿದೆ.

1. ಬೆಳಿಗ್ಗೆ 06.00 ಗಂಟೆಯಿಂದ ಬೆಳಿಗ್ಗೆ 07.00 ಗಂಟೆಯವರೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ ಬ್ಯಾಂಡ್ ಸ್ಟ್ಯಾಂಡ್ ಆವರಣದಲ್ಲಿ "**ಉದ್ಯಾನವನದಲ್ಲಿ ಉದಯರಾಗ**" ಎಂಬ ಶೀರ್ಷಿಕೆಯಡಿ ಶ್ರೀ ವಿಜಯ್.ಬಿ ಮತ್ತು ತಂಡ, ಬೆಂಗಳೂರು ನಗರ ಜಿಲ್ಲೆರವರಿಂದ ಜಾನಪದ ಮತ್ತು ಭಾವಗೀತೆಗಳ ಸಂಗೀತ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
2. ಸಂಜೆ 05.00 ಗಂಟೆಯಿಂದ ಸಂಜೆ 06.00 ಗಂಟೆಯವರೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ ಬ್ಯಾಂಡ್ ಸ್ಟ್ಯಾಂಡ್ ಆವರಣದಲ್ಲಿ "**ಉದ್ಯಾನವನದಲ್ಲಿ ಸಂಧ್ಯಾರಾಗ**" ಎಂಬ ಶೀರ್ಷಿಕೆಯಡಿ ಶ್ರೀ ರಾಜುಬುದ್ದಿ ಮತ್ತು ತಂಡ, ಮೈಸೂರು ಜಿಲ್ಲೆರವರಿಂದ ಜಾನಪದ ಗೀತೆ ಮತ್ತು ಭಾವಗೀತೆಗಳ ಸಂಗೀತ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
3. ಬೆಳಿಗ್ಗೆ 6.00 ಗಂಟೆಯಿಂದ ಸಂಜೆ 6.00 ಗಂಟೆಯವರೆಗೆ ಉದ್ಯಾನವನದಲ್ಲಿರುವ ಒಳರಸ್ತೆಗಳಲ್ಲಿ ನಗರ ಭೂಸಾರಿಗೆ ನಿರ್ದೇಶನಾಲಯರವರ ಸಹಯೋಗದೊಂದಿಗೆ ಬಾಡಿಗೆ ರಹಿತ ಸೈಕಲ್ ಸವಾರಿ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
4. ಉದ್ಯಾನವನದ ಆವರಣದಲ್ಲಿ ಜೈವಿಕ್ ಕೃಷಿಕ್ ಸೊಸೈಟಿ(ರಿ), ಲಾಲ್‌ಬಾಗ್, ಬೆಂಗಳೂರುರವರು ತಮ್ಮ ಮಾರಾಟ ಮಳಿಗೆಯಲ್ಲಿ ಸಾವಯವ ಪದ್ಧತಿಯಲ್ಲಿ ಬೆಳೆದ ವಿವಿಧ ರೀತಿಯ ಹಣ್ಣುಗಳು ಮತ್ತು ಹಣ್ಣಿನ ಜ್ಯೂಸ್ ಮತ್ತು ಇತರೆ ಸಾವಯವ ಆಹಾರ ಪದಾರ್ಥಗಳ ಮಾರಾಟವನ್ನು ಕೈಗೊಳ್ಳುತ್ತಾರೆ.
5. ಉದ್ಯಾನವನದ ಆವರಣದಲ್ಲಿ ಹಾಪ್‌ಕಾಮ್ಸ್, ಬೆಂಗಳೂರುರವರು ವಿವಿಧ Cut Fruits, Dry Fruits ಮತ್ತು ವಿವಿಧ ತಾಜಾ ಹಣ್ಣುಗಳು, ಪ್ಯಾಕ್ ಮಾಡಿದ ತಾಜಾ ತರಕಾರಿಗಳು ಹಾಗೂ ಹಣ್ಣಿನ ಜ್ಯೂಸ್‌ಗಳ ಮಾರಾಟವನ್ನು ಕೈಗೊಳ್ಳುತ್ತಾರೆ.
6. ಉದ್ಯಾನವನದ ಆವರಣದಲ್ಲಿ ದಿ ನರ್ಸರಿಮೆನ್ ಕೋ-ಆಪರೇಟೀವ್ ಸೊಸೈಟಿ, ಲಾಲ್‌ಬಾಗ್, ಬೆಂಗಳೂರುರವರು ವಿವಿಧ ಅಲಂಕಾರಿಕ ಗಿಡಗಳು ಮತ್ತು ಉದ್ಯಾನವನ ಸಲಕರಣೆಗಳ ಮಾರಾಟವನ್ನು ಕೈಗೊಳ್ಳುತ್ತಾರೆ.
7. ಸಾರ್ವಜನಿಕ ಗ್ರಂಥಾಲಯ ಇಲಾಖೆ, ಬೆಂಗಳೂರುರವರ ವತಿಯಿಂದ ನಗರ ಕೇಂದ್ರ ಗ್ರಂಥಾಲಯ ಮತ್ತು ಇಂದಿರಾ ಪ್ರಿಯದರ್ಶಿನಿ ಮಕ್ಕಳ ಗ್ರಂಥಾಲಯದ ಆವರಣದಲ್ಲಿ ಪುಸ್ತಕ ಪ್ರದರ್ಶನವನ್ನು ಏರ್ಪಡಿಸಲಾಗಿದೆ.
8. ಕಬ್ಬನ್ ಉದ್ಯಾನವನದ ಒಳರಸ್ತೆಗಳಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ವಯೋವೃದ್ಧರ ಅನುಕೂಲಕ್ಕಾಗಿ ಎರಡು ಸಂಖ್ಯೆಯ **ಪರಿಸರ ಸ್ನೇಹಿ ವಿದ್ಯುತ್‌ಚಾಲಿತ ವಾಹನಗಳ** ಸೇವೆಯನ್ನು ನಿಗಧಿತ ಶುಲ್ಕ ನೀಡಿ ಸಾರ್ವಜನಿಕರು ಪಡೆಯಬಹುದು.

## ಈ ಭಾನುವಾರದ ವಿಶೇಷ ಕಾರ್ಯಕ್ರಮಗಳು:

### I.ಸ್ಥಳ: ಬ್ಯಾಂಡ್ ಸ್ಟ್ಯಾಂಡ್ ಆವರಣ

- **ಬೆಳಿಗ್ಗೆ 7.00 ಗಂಟೆಯಿಂದ 8.00 ಗಂಟೆಯವರೆಗೆ ಯೂನಿವರ್ಸ್ ಆರ್ಟ್ ಫೌಂಡೇಶನ್ ಸಂಸ್ಥೆಯ ಸಹಯೋಗದೊಂದಿಗೆ ಕುಮಾರಿ ಅಪೂರ್ವ.ಎನ್.ಪ್ರಕಾಶ್ ಮತ್ತು ಅಕ್ಷತಾ ಗೋಪಿನಾಥ ರವರಿಂದ ಭರತನಾಟ್ಯ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.**

- ಬೆಳಿಗ್ಗೆ 08.00 ಗಂಟೆಯಿಂದ 09.00 ಗಂಟೆಯವರೆಗೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಬಾಲಭವನ ಸೊಸೈಟಿ, ಬೆಂಗಳೂರುರವರ ಸಹಯೋಗದೊಂದಿಗೆ ನಾಟ್ಯಾರಾಧನ ಸಂಸ್ಥೆ, ಬೆಂಗಳೂರುರವರ ವತಿಯಿಂದ ನೃತ್ಯ ಪ್ರದರ್ಶನ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
- ಬೆಳಿಗ್ಗೆ 9.00 ರಿಂದ 10.00 ಗಂಟೆವರೆಗೆ **IDL BLIND BAND** ರವರಿಂದ ಅಂತರಾಷ್ಟ್ರೀಯ ಮಹಿಳಾ ವಿಶ್ವ ದಿನಾಚರಣೆ ಅಂಗವಾಗಿ ಅಂಧ ಮತ್ತು ದೃಷ್ಟಿ ವಿಕಲಚೇತನ/ದಿವ್ಯಾಂಗ ರವರಿಂದ ಸಂಗೀತ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
- ಸಂಜೆ 4.00 ಗಂಟೆಯಿಂದ 5.00 ಗಂಟೆಯವರೆಗೆ ಕನ್ನಡ ಅಭಿವೃದ್ಧಿ ಪ್ರಾಧಿಕಾರ ಮತ್ತು ಅಕ್ಷಯ ಫೌಂಡೇಷನ್ ರವರ ಸಹಯೋಗದೊಂದಿಗೆ ಶ್ರೀ ಹಿತೇಂದ್ರಶಾಸ್ತ್ರಿ ಪತ್ರಕರ್ತರವರಿಂದ ಕನ್ನಡ ಭಾಷೆಗೆ ಗ್ರಾಮೀಣ ಕೊಡುಗೆ ಕುರಿತು ಉಪನ್ಯಾಸ ಕಾರ್ಯಕ್ರಮ ಹಾಗೂ ಪೂರ್ಣಿಮಾ ಕಾರ್ತಿಕ್ ಮತ್ತು ಅಶ್ವಿನಿ ರುಘುಪತಿ ರವರಿಂದ ಒಡಿಸ್ಸಿ ನೃತ್ಯ ಪ್ರದರ್ಶನ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

**II.ಸ್ಥಳ: ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಹತ್ತಿರ**

- ಬೆಳಿಗ್ಗೆ 7.00 ರಿಂದ ಸಂಜೆ 6.00 ಗಂಟೆವರೆಗೆ ಕರ್ನಾಟಕ ಗೃಹ ಮಂಡಳಿಯು ಕೆಂಗೇರಿ ಉಪನಗರದಲ್ಲಿ ಕೆ.ಹೆಚ್.ಬಿ. ಡೈಮಂಡ್ ಮತ್ತು ಕೆ.ಹೆಚ್.ಬಿ. ಫ್ಲಾಟಿನಂ ಎಂಬ ಎರಡು ವಸತಿ ಸಮುಚ್ಛಯಗಳನ್ನು ನಿರ್ಮಿಸಿದ್ದು, ಸದರಿ ವಸತಿ ಸಮುಚ್ಛಯಗಳು ವಾಸಿಸಲು ಸಿದ್ದವಿದ್ದು, ಇವುಗಳು ಮಾರಾಟಕ್ಕೆ ಲಭ್ಯವಿರುವ ಬಗ್ಗೆ ಸಾರ್ವಜನಿಕರಿಗೆ ವ್ಯಾಪಕ ಪ್ರಚಾರ.
- ಬೆಳಿಗ್ಗೆ 6.00 ಗಂಟೆಯಿಂದ ಮಧ್ಯಾಹ್ನ 12.00 ಗಂಟೆಯವರೆಗೆ ವಿದ್ಯಾರಣ್ಯ ಸಂಸ್ಥೆಯು ನಡೆಸುತ್ತಿರುವ ಉದ್ಯೋಗಸ್ಥ ವಿಕಲಚೇತನ ಮಹಿಳಾ ಫಲಾನುಭವಿಗಳಿಂದ ತಯಾರಿಸಿದ ವಸ್ತುಗಳ ಪ್ರದರ್ಶನ ಮತ್ತು ಮಾರಾಟವನ್ನು ಏರ್ಪಡಿಸಲಾಗಿದೆ.

  ಬಾಬು/ಕೆಎಂ

## ಈ ವಾರದ ಬೆಳ್ಳಿ ಸಿನಿಮಾ "ಹಗ್ಗದ ಕೊನೆ" ಚಲನಚಿತ್ರ

ಬೆಂಗಳೂರು, ಮಾರ್ಚ್ 4 (ಕರ್ನಾಟಕ ವಾರ್ತೆ)

ಕರ್ನಾಟಕ ಚಲನಚಿತ್ರ ಅಕಾಡೆಮಿಯು ಪ್ರತಿ ಶನಿವಾರ ನಡೆಸುವ ಬೆಳ್ಳಿಸಿನಿಮಾ ಬೆಳ್ಳಿಮಾತು ಕಾರ್ಯಕ್ರಮದಲ್ಲಿ ಮಾರ್ಚ್ 5 ರ ಶನಿವಾರ ಸಂಜೆ 4-00 ಗಂಟೆಗೆ ನಗರದ ಚಾಮುಂಡೇಶ್ವರಿ ಸ್ಟುಡಿಯೋದಲ್ಲಿ ಬೆಳ್ಳಿ ಸಿನಿಮಾ "ಹಗ್ಗದ ಕೊನೆ" ಚಲನಚಿತ್ರವನ್ನು ಪ್ರದರ್ಶಿಸಲಾಗುತ್ತಿದೆ ಎಂದು ಅಕಾಡೆಮಿ ರಿಜಿಸ್ಟ್ರಾರ್ ಹೆಚ್. ಬಿ. ದಿನೇಶ್ ಅವರು ತಿಳಿಸಿದ್ದಾರೆ.

ಅಂದು " ಹಗ್ಗದ ಕೊನೆ " ಚಲನಚಿತ್ರ ಪ್ರದರ್ಶನದ ನಂತರ ಚಿತ್ರದ ನಿರ್ದೇಶಕ ಮತ್ತು ನಿರ್ಮಾಪಕ ಶ್ರೀ ದಯಾಳ್ ಪದ್ಮನಾಭನ್ ಅವರ ಬೆಳ್ಳಿಮಾತು – ಸಂವಾದ ಏರ್ಪಡಿಸಲಾಗಿದೆ. ಮುಖ್ಯ ಅತಿಥಿಗಳಾಗಿ ಚಲನಚಿತ್ರ ನಟ ನವೀನ್‌ಕೃಷ್ಣ ಹಾಗೂ ಹಗ್ಗದ ಕೊನೆ ಚಿತ್ರದ ನಿರ್ಮಾಪಕ ಶ್ರೀ ಉಮೇಶ್ ಬಣಕಾರ್ ಅವರು ಪಾಲ್ಗೊಳ್ಳುವರು. ಸಮಾರಂಭದ ಅಧ್ಯಕ್ಷತೆಯನ್ನು ಅಕಾಡೆಮಿ ಅಧ್ಯಕ್ಷ ಎಸ್. ವಿ. ರಾಜೇಂದ್ರಸಿಂಗ್ ಬಾಬು ವಹಿಸುವರು ಎಂದು ಅವರು ತಿಳಿಸಿದ್ದಾರೆ.

ಬಾಬು:ಜಿಪಿಆರ್

# ಅವಧಿ ವಿಸ್ತರಣೆ

ಬೆಂಗಳೂರು, ಮಾರ್ಚ್ 4 (ಕರ್ನಾಟಕ ವಾರ್ತೆ)

ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯು ಮೇ 2016 ರ ವಾಣಿಜ್ಯ ಪರೀಕ್ಷೆಗೆ ಹಾಜರಾಗುವ ಅಭ್ಯರ್ಥಿಗಳು ಪರೀಕ್ಷಾ ಶುಲ್ಕ ಪಾವತಿಸಲು ಮಾರ್ಚ್ 30 ರವರೆಗೆ ಅವಧಿ ವಿಸ್ತರಿಸಿದೆ.

ಬಾಬು:ಜಿಪಿಆರ್

# ನೂತನ ಶಾಸಕರ ಪ್ರಮಾಣ ವಚನ

ಬೆಂಗಳೂರು, ಮಾರ್ಚ್ 4 (ಕರ್ನಾಟಕ ವಾರ್ತೆ)

ರಾಜ್ಯ ವಿಧಾನಸಭೆಗೆ ರಾಯಚೂರು ಜಿಲ್ಲೆ ದೇವದುರ್ಗ ವಿಧಾನಸಭಾ ಕ್ಷೇತ್ರದಿಂದ ನೂತನ ಶಾಸಕರಾಗಿ ಆಯ್ಕೆಯಾಗಿರುವ ಶ್ರೀ ಕೆ. ಶಿವನಗೌಡ ನಾಯಕ್ ಅವರು ಇಂದು ವಿಧಾನಸಭೆಯಲ್ಲಿ ಸಭಾಧ್ಯಕ್ಷ ಶ್ರೀ ಕಾಗೋಡು ತಿಮ್ಮಪ್ಪ ಅವರ ಸಮ್ಮುಖದಲ್ಲಿ ನೂತನ ಶಾಸಕರಾಗಿ ಪ್ರಮಾಣ ವಚನ ಸ್ವೀಕರಿಸಿದರು.

ಬಾಬು:ಜಿಪಿಆರ್

# ಸಂದರ್ಶನ

ಬೆಂಗಳೂರು, ಮಾರ್ಚ್ 4 (ಕರ್ನಾಟಕ ವಾರ್ತೆ)

ಕರ್ನಾಟಕ ಲೋಕಸೇವಾ ಆಯೋಗವು ತೋಟಗಾರಿಕೆ ಇಲಾಖೆಯಲ್ಲಿನ ಸಹಾಯಕ ತೋಟಗಾರಿಕೆ ಅಧಿಕಾರಿಗಳ 343 ಹುದ್ದೆಗಳು ಮತ್ತು 19 ಬ್ಯಾಕ್‌ಲ್ಯಾಗ್ ಹುದ್ದೆಗಳ ನೇಮಕಾತಿಗಾಗಿ ಸಂದರ್ಶನವನ್ನು ಮಾರ್ಚ್ 8, 11, 14 ಮತ್ತು 15 ರಂದು ಬೆಳಿಗ್ಗೆ 9–30 ಗಂಟೆಗೆ ಮತ್ತು ಮಧ್ಯಾಹ್ನ 2–30 ಗಂಟೆಗೆ ಬೆಂಗಳೂರಿನ ಆಯೋಗದ ಕೇಂದ್ರ ಕಚೇರಿಯಲ್ಲಿ ನಡೆಸಲಿದೆ.

ಅರ್ಹ ಅಭ್ಯರ್ಥಿಗಳಿಗೆ ಸಂದರ್ಶನದ ಸೂಚನಾ ಪತ್ರವನ್ನು ಈಗಾಗಲೇ ಕಳುಹಿಸಲಾಗಿದೆ. 1:3 ಅನುಪಾತದಲ್ಲಿ ಸಂದರ್ಶನಕ್ಕೆ ಅರ್ಹರಾದ ಅಭ್ಯರ್ಥಿಗಳನ್ನು ಮಾಹಿತಿಗಾಗಿ ಆಯೋಗದ ವೆಬ್‌ಸೈಟ್ "http://kpsc.kar.nic.inEligibility List" ನಲ್ಲಿ ಪ್ರಕಟಿಸಿದೆ

ಬಾಬು:ಜಿಪಿಆರ್

# ಅವಧಿ ವಿಸ್ತರಣೆ

ಬೆಂಗಳೂರು, ಮಾರ್ಚ್ 4 (ಕರ್ನಾಟಕ ವಾರ್ತೆ)

ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯು ಮೇ 2016 ರ ಶಿಕ್ಷಣ ಪರೀಕ್ಷೆಗೆ ಹಾಜರಾಗುವ ಅಭ್ಯರ್ಥಿಗಳು ಪರೀಕ್ಷಾ ಶುಲ್ಕ ಪಾವತಿಸಲು ಮಾರ್ಚ್ 30 ರವರೆಗೆ ಅವಧಿ ವಿಸ್ತರಿಸಿದೆ.

ಬಾಬು:ಜಿಪಿಆರ್

# ಧನಗೂರಿನಲ್ಲಿ ಕರ್ನಾಟಕ ಬಂಡೂರು ಕುರಿ ಸಂವರ್ಧನಾ ತರಬೇತಿ ಕೇಂದ್ರ

ಬೆಂಗಳೂರು, ಮಾರ್ಚ್ 4 (ಕರ್ನಾಟಕ ವಾರ್ತೆ)

ಕೇಂದ್ರೀಯ ಉಣ್ಣೆ ಅಭಿವೃದ್ಧಿ ಮಂಡಳಿ, ಜೋಧ್‌ಪುರ, ರಾಜಸ್ಥಾನ ಇವರ ಸಹಯೋಗದಿಂದ, ಕೇಂದ್ರೀಯ ಕುರಿತ ಸಂವರ್ಧನಾ ಕೇಂದ್ರ, ಹಿಸ್ಸಾರ, ಹರಿಯಾಣ ಇಲ್ಲಿ ಕರ್ನಾಟಕ ರಾಜ್ಯದ ಕುರಿ ಮತ್ತು ಆಡು ಸಾಕಾಣಿಕೆದಾರರಿಗೆ ವೈಜ್ಞಾನಿಕ ಕುರಿ ಮೇಕೆ ಅಭಿವೃದ್ಧಿ ಮತ್ತು ನಿರ್ವಹಣೆ ಕುರಿತಾದ ತರಬೇತಿ ನಡೆಸಲಾಗುತ್ತಿತ್ತು.

ಇದರಿಂದ ಕರ್ನಾಟಕ ರಾಜ್ಯದ ಕುರಿ ಮತ್ತು ಮೇಕೆ ಸಾಕಾಣೀಕೆದಾರರು ತರಬೇತಿ ಪಡೆಯಲು ಹಲವಾರು ತೊಂದರೆಗಳು ಎದುರಾಗುತ್ತಿದ್ದವು. ಮುಖ್ಯವಾಗಿ ದೂರದ ಪ್ರಯಾಣಕ್ಕೆ ಕುರಿಗಾರರಿಗೆ ತಮ್ಮ ವೃತ್ತಿ ಜೀವನದಲ್ಲಿ ಬಿಡುವು ಸಿಗುತ್ತಿರಲಿಲ್ಲ. ಆರ್ಥಿಕ ಸಮಸ್ಯೆ, ಭಾಷಾ ಸಮಸ್ಯೆ ಮುಂತಾದ ಕಾರಣಗಳಿಗಾಗಿ ಸಾಕಷ್ಟು ಆಸಕ್ತ ಕುರಿಗಾರರು ತರಬೇತಿಗೆ ಮುಂದೆ ಬರುತ್ತಿರಲಿಲ್ಲ.

ಈ ಎಲ್ಲಾಕಷ್ಟಗಳನ್ನು ಸಮಸ್ಯೆಗಳನ್ನು ಮನವರಿಕೆ ಮಾಡಿಕೊಂಡ ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮದ ಅಧ್ಯಕ್ಷ ಪಂಡಿತ್ ರಾವ್ ಚದ್ರಿಯವರು ಖುದ್ದು ಆಸಕ್ತಿವಹಿಸಿ ಹಲವಾರು ಬಾರಿ ಪತ್ರ ವ್ಯವಾಹರ ನಡೆಸಿದ ಫಲವಾಗಿ ಕೇಂದ್ರೀಯ ಉಣ್ಣೆ ಅಭಿವೃದ್ದಿ ಮಂಡಳಿ, ಜೋದ್‌ಪುರ ಇವರು ಕರ್ನಾಟಕದ ಬಂಡೂರು ಕುರಿ ಸಂವರ್ಧನಾ ಕೇಂದ್ರ, ಧನಗೂರು, ಮಳವಳ್ಳಿ ತಾಲ್ಲೂಕು, ಮಂಡ್ಯ ಜಿಲ್ಲೆ ಇಲ್ಲಿ ಮೇಲ್ಕಂಡ ತರಬೇತಿಯನ್ನು ನಡೆಸಲು ಅನುಮತಿ ನೀಡಿದೆ.

ಈ ಹಿನ್ನೆಲೆಯಲ್ಲಿ ಮಾರ್ಚ್ 16 ರಂದು ಮಂಡ್ಯ ಜಿಲ್ಲೆ, ಮಳ್ಳವಳ್ಳಿ ತಾಲ್ಲೂಕಿನ ಧನಗೂರಿನಲ್ಲಿ ಕರ್ನಾಟಕ ಬಂಡೂರು ಕುರಿ ಸಂವರ್ಧನಾ ತರಬೇತಿ ಕೇಂದ್ರವನ್ನು ಆರಂಭಿಸಲಾಗುವುದು ಎಂದು ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮದ ಅಧ್ಯಕ್ಷ ಪಂಡಿತ್ ರಾವ್ ಚದ್ರಿ ಅವರು ತಿಳಿಸಿದ್ದಾರೆ.

ಇಮ ಕರ್ನಾಟಕ ರಾಜ್ಯದ ಕುರಿ ಆಡು ಸಾಕಾಣಿಕೆದಾರರಿಗೆ ಸಿಹಿ ಸುದ್ದಿ ಇನ್ನು ಮುಂದೆ ಕರ್ನಾಟಕದಲ್ಲಿಯೇ ನಾಲ್ಕು ದಿನಗಳ ವೈಜ್ಞಾನಿಕ ಕುರಿ ಮೇಕೆ ಅಭಿವೃದ್ಧಿ ಮತ್ತು ನಿರ್ವಹಣೆಯ ತರಬೇತಿ ಸಿಗಲಿದೆ. ಈ ಸುಸಜ್ಜಿತ ನಿವಾಸ, ತರಬೇತಿ ಸೌಲಭ್ಯವನ್ನು ಆಸಕ್ತ ಕುರಿ ಮೇಕೆ

ಸಾಕಾಣಿಕೆದಾರರು ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮವನ್ನು ಸಂಪರ್ಕಿಸುವ ಮೂಲಕ ಇನ್ನು ಮುಂದೆ ತರಬೇತಿ ಪಡೆದುಕೊಳ್ಳಬಹುದಾಗಿದೆ.

ಹೆಚ್ಚಿನ ವಿವರಗಳಿಗಾಗಿ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ದಿ ನಿಗಮ (ನಿ) 'ಕುರಿ ಭವನ' ಹೆಬ್ಬಾಳ, ಬೆಂಗಳೂರು – ದೂರವಾಣಿ ಸಂಖ್ಯೆಗಳಾದ 9980630908 ಮತ್ತು 080 – 23413294. ಉಪ ನಿರ್ದೇಶಕರು, ಬಂಡೂರು ಕುರಿ ಸಂವರ್ಧನಾ ಕೇಂದ್ರ, ಧನಗೂರು : 9448424460 ಆಗಿರುತ್ತದೆ ಎಂದು ಅವರು ತಿಳಿಸಿದ್ದಾರೆ.

ಬಾಬು:ಜಿಪಿಆರ್.